**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.**

ಸಿಸಿ ನಂಃ **72/2024**

| | | |
|---|---|---|
| ಹೆಸರು | ಪ್ರಸನ್ನ | ಸಿ.ಡಬ್ಲ್ಯೂ3 |
| ತಂದೆಯ ಹೆಸರು | ಶಿವಣ್ಣ | ಪಿ.ಡಬ್ಲ್ಯೂ3 |
| ವಯಸ್ಸು | 29 ವರ್ಷ | |
| ಉದ್ಯೋಗ | ಡೈರಿಯಲ್ಲಿ ಸೇಲ್ಸ್ ಮ್ಯಾನ್ ಕೆಲಸ | |
| ವಾಸ ಸ್ಥಳ | ಚೋಳನಹಳ್ಳಿ | |

ಸಾಕ್ಷಿಗೆ ದಿನಾಂಕಃ 24.12.2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಎ ಪಿ ಪಿ ರವರಿಂದ ಃ

ನನಗೆ ಆರೋಪಿಯ ಪರಿಚಯವಿದೆ. ದಿ: 14.05.2024 ರಂದು ನಾನು ಕ್ಯಾಂಟರ್ ವಾಹನದಲ್ಲಿ ಹೋಗಿದ್ದು, ಸದರಿ ವಾಹನಕ್ಕೆ ಆರೋಪಿಯು ಚಾಲಕ ಆಗಿದ್ದರು. ಚಾಮರಾಜನಗರ ದಿಂದ ವಾಪಸ್ ಮಳವಳ್ಳಿಯ ಡೈರಿಗೆ ಬಂದಿರುತ್ತೇವೆ. ನಾನು ಮಲಗಿದ್ದ ಕಾರಣ ಅಪಘಾತವು ಯಾವ ರೀತಿ, ಹೇಗೆ ಆಗಿದೆ ಎಂದು ನನಗೆ ಗೊತ್ತಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿರುವುದಿಲ್ಲ. ನಾನು ಅಪಘಾತವನ್ನು ಪ್ರತ್ಯಕ್ಷವಾಗಿ ನೋಡಿರುವುದಿಲ್ಲ. ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.

ಪಾಟೀ ಸವಾಲುಃ ಎ ಪಿ ಪಿ ರವರಿಂದ ಃ

ಆರೋಪಿಯು ಕ್ಯಾಂಟರ್ ವಾಹನವನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಬೈಕಗೆ ಡಿಕ್ಕಿ ಪಡಿಸಿದ್ದು, ಸದರಿ ಅಪಘಾತದ ಶಬ್ದವನ್ನು ನಾನು ಕೇಳಿ ಹೊರಗಡೆ ಬಂದು ನೋಡಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತವು ಆರೋಪಿಯ ತಪ್ಪಿನಿಂದ ಆಗಿದೆ ಎಂದು ಈಗ ಓದಿ ಹೇಳಲಾದಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂಧರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಅಲ್ಲಗಳೆದ ಕಾರಣ ಅದನ್ನು ನಿಪಿ 12 ಎಂದು ಗುರುತಿಸಲಾಯಿತು. ಎಲ್ಲಾ ಗೊತ್ತಿದ್ದರೂ ಸಹ ಆರೋಪಿಯು ನಮ್ಮ ಸಂಸ್ಥೆಯ ಚಾಲಕ ಆದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.